ಸಂಕೇಶ್ವರದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆ.

142(23)

ಶ್ರೀ ಅಪ್ಪಯ್ಯಗೌಡ ಬಸಗೌಡ ಪಾಟೀಲ (ಸಂಕೇಶ್ವರ್): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಸಂಕೇಶ್ವರ ಮತ ಕ್ಷೇತ್ರದಲ್ಲಿ ಮಳೆ ಕಡಿಮೆಯಾಗಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ. ಬಂದಿದ್ದಲ್ಲಿ ಇದರ ಬಗ್ಗೆ ಗ್ರಾಮವಾರು ಮಾಹಿತಿ ಸರ್ಕಾರದ ಬಳಿ ಇದೆಯೇ?

ಇ. ಹಾಗಿದ್ದಲ್ಲಿ ಈ ಸಮಸ್ಯೆ ನಿವಾರಣೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು? ಇದಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ. ಇಲ್ಲವಾದಲ್ಲಿ ಯಾವಾಗ ಹಣ ಬಿಡುಗಡೆ ಮಾಡಲಾಗುವುದು?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ. ಸಂಕೇಶ್ವರ ಮತಕ್ಷೇತ್ರ 7 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ. 1.ಕೇಸ್ತಿ 2.ಬಾಡವಾಡಿ 3.ಅಂಕಲಿ 4.ಸೊಲ್ಲಾಪುರ 5.ಹರಗಾಪುರ 6.ಬೆನಕನಹೊಳೆ ಮತ್ತು 7.ಹಂಚಿನಾಳ್ ಗ್ರಾಮಗಳಲ್ಲಿ ನೀರು ಪೂರೈಕೆ ಪ್ರಮಾಣ ದಿನಂಪ್ರತಿ ತಲಾ 20 ಲೀಟರ್‌ಗಳಿಗಿಂತ ಕಡಿಮೆಯಿರುತ್ತದೆ.

ಇ. ಮೇಲ್ಕಂಡ ಗ್ರಾಮಗಳಲ್ಲಿ ಸಮರ್ಪಕ ಕುಡಿಯುವ ನೀರಿನ ಪೂರೈಕೆಗಾಗಿ ಆದ್ಯತೆ ಮೇಲೆ ಯೋಜನೆಗಳನ್ನು ತಯಾರಿಸಿ ಕೈಗೆತ್ತಿಕೊಳ್ಳಲು ಬೆಳಗಾವಿ ಜಿಲ್ಲಾ ಪಂಚಾಯತಿಗೆ ನಿರ್ದೇಶಿಸಲಾಗಿದೆ.

ಹುಕ್ಕೇರಿ-ಸಂಕೇಶ್ವರ ದಾರಿ ಮಧ್ಯದ ಹಳ್ಳಿಗಳಿಗೆ ಕುಡಿಯುವ ನೀರಿನ ಯೋಜನೆ.

143(24)